**National**
**Kannada**
**11.08.2026 19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

1. ನ್ಯಾಯಮಂಡಳಿಗಳ ಸುಧಾರಣಾ ಮಸೂದೆ-೨೦೨೬ಕ್ಕೆ ಸಂಸತ್ತು ಅನುಮೋದನೆ
2. ರಾಷ್ಟ್ರೀಯ ಸಹಕಾರ ಅಭಿವೃದ್ಧಿ ನಿಗಮ ತಿದ್ದುಪಡಿ ಮಸೂದೆ-೨೦೨೬ ಅಂಗೀಕರಿಸಿದ ಲೋಕಸಭೆ
3. ಅರುಣಾಚಲ ಪ್ರದೇಶ, ಭಾರತದ ಅವಿಭಾಜ್ಯ ಅಂಗ, ವಾಸ್ತವ ಬದಲಾಯಿಸಲು ಸಾಧ್ಯವಿಲ್ಲ - ಭಾರತ ಪುನರುಚ್ಚಾರ
4. ಉಕ್ರೇನ್ ಮೇಲೆ ರಷ್ಯಾ ದಾಳಿ; ೯ ನಾಗರಿಕರು ಸಾವು, ೨೪ಕ್ಕೂ ಹೆಚ್ಚು ಜನರಿಗೆ ಗಾಯ

<><><><>

ನ್ಯಾಯಮಂಡಳಿಗಳ ಸುಧಾರಣಾ ಮಸೂದೆ-೨೦೨೬ ಅನ್ನು ಸಂಸತ್ ಅಂಗೀಕರಿಸಿದೆ. ರಾಜ್ಯಸಭೆಯು ಇಂದು ಈ ಮಸೂದೆಯನ್ನು ಅನುಮೋದಿಸಿದ್ದು, ಲೋಕಸಭೆ ಈಗಾಗಲೇ ಮಸೂದೆಯನ್ನು ಅಂಗೀಕರಿಸಿದೆ. ಕೇಂದ್ರ ಕಾನೂನು ಮತ್ತು ನ್ಯಾಯಖಾತೆ ರಾಜ್ಯ ಸಚಿವ ಅರ್ಜುನ್ ರಾಮ್ ಮೇಘವಾಲ್ ಈ ಮಸೂದೆಯನ್ನು ಮಂಡಿಸಿದರು. ಈ ಮಸೂದೆಯು ದಕ್ಷತೆಯನ್ನು ಸುಧಾರಿಸಲು ಸ್ವಾತಂತ್ರ್ಯ, ಪಾರದರ್ಶಕತೆ ಹಾಗೂ ವಿವಿಧ ನ್ಯಾಯಮಂಡಳಿಗಳ ಅಧ್ಯಕ್ಷರು ಮತ್ತು ಸದಸ್ಯರ ಅರ್ಹತೆ, ನೇಮಕಾತಿ ಮತ್ತು ಸೇವೆಯಲ್ಲಿ ಏಕರೂಪತೆಯನ್ನು ಖಚಿತಪಡಿಸುವುದು ಹಾಗೂ ನ್ಯಾಯಮಂಡಳಿಗಳ ಆಡಳಿತ ಮತ್ತು ಕಾರ್ಯನಿರ್ವಾಹಣೆಯ ಗುರಿಯನ್ನು ಹೊಂದಿದೆ ಎಂದು ಹೇಳಿದರು. ನೂತನ ಮಸೂದೆಯು ರಾಷ್ಟ್ರೀಯ ನ್ಯಾಯಮಂಡಳಿ ಆಯೋಗವನ್ನು ಸ್ಥಾಪಿಸುವ ನಿಬಂಧನೆಗಳನ್ನು ಹೊಂದಿದೆ. ಅದರ ಅಧ್ಯಕ್ಷತೆಯನ್ನು ಸುಪ್ರೀಂ ಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿ ಅಥವಾ ಹೈಕೋರ್ಟ್‌ನ ನಿವೃತ್ತ ಮುಖ್ಯ ನ್ಯಾಯಮೂರ್ತಿಗಳು ವಹಿಸುತ್ತಾರೆ ಎಂದು ತಿಳಿಸಿದರು. ಈ ಸುಧಾರಣೆಯು ನ್ಯಾಯದ ಸುಲಭತೆ, ವ್ಯವಹಾರವನ್ನು ಸುಲಭಗೊಳಿಸುವುದು ಮತ್ತು ಜಾಗತಿಕ ಉತ್ತಮ ಅಭ್ಯಾಸಗಳ ಅಳವಡಿಕೆಯನ್ನು ಉತ್ತೇಜಿಸಲಿದೆ ಎಂದು ಸಚಿವ ಅರ್ಜುನ್ ರಾಮ್ ಮೇಘವಾಲ್ ಹೇಳಿದರು.

<><><><>

ಲೋಕಸಭೆಯು ಕೇರಳ ಹೆಸರು ಬದಲಾವಣೆ ಮಸೂದೆ- ೨೦೨೬ ಅನ್ನು ಅಂಗೀಕರಿಸಿದೆ. ಕೇರಳ ರಾಜ್ಯದ ಹೆಸರನ್ನು ಕೇರಳಂ ಎಂದು ಬದಲಾಯಿಸಲು ಈ ಮಸೂದೆ ಪ್ರಯತ್ನಿಸುತ್ತದೆ. ಈ ಕುರಿತು ಕೇರಳ ವಿಧಾನಸಭೆಯು ಜೂನ್ ೨೦೨೪ ರಲ್ಲಿ ನಿರ್ಣಯವನ್ನು ಅಂಗೀಕರಿಸಿತು. ಮಸೂದೆಯ

ಕುರಿತು ಮಾತನಾಡಿದ ಕೇಂದ್ರ ಗೃಹ ಖಾತೆ ರಾಜ್ಯ ಸಚಿವ ನಿತ್ಯಾನಂದ ರೈ, ಕೇರಳ ವಿಧಾನಸಭೆಯು ೨೦೨೪ ರಲ್ಲಿ ಕೇಂದ್ರವನ್ನು ಕೇರಳದಿಂದ ಕೇರಳಂ ಎಂದು ರಾಜ್ಯದ ಹೆಸರನ್ನು ಬದಲಾಯಿಸುವಂತೆ ವಿನಂತಿಸಿ ನಿರ್ಣಯವನ್ನು ಅಂಗೀಕರಿಸಿತ್ತು ಎಂದು ಹೇಳಿದರು. ಮಲಯಾಳಂನಲ್ಲಿ ರಾಜ್ಯದ ಹೆಸರು ಕೇರಳಂ ಎಂದಾಗಿದ್ದು, ಸಂವಿಧಾನದಲ್ಲಿ ಅದನ್ನು ಕೇರಳ ಎಂದು ಬರೆಯಲಾಗಿದೆ ಎಂಬ ಕಾರಣದಿಂದಾಗಿ ಈ ಸಂಬಂಧ ವಿನಂತಿಯನ್ನು ಮಾಡಲಾಗಿದೆ ಎಂದರು. ಈ ವರ್ಷದ ಫೆಬ್ರವರಿಯಲ್ಲಿ ಕೇಂದ್ರ ಸಚಿವ ಸಂಪುಟವು ರಾಜ್ಯದ ಹೆಸರನ್ನು ಕೇರಳಂ ಎಂದು ಬದಲಾಯಿಸುವ ಮತ್ತು ಈ ನಿಟ್ಟಿನಲ್ಲಿ ತಿದ್ದುಪಡಿಗಾಗಿ ಅಗತ್ಯವಾದ ಶಾಸನವನ್ನು ಪರಿಚಯಿಸುವ ಪ್ರಸ್ತಾಪವನ್ನು ಅನುಮೋದಿಸಿದೆ ಎಂದು ಸಚಿವರು ಹೇಳಿದರು. ಇದೇ ವೇಳೆ, ಲೋಕಸಭೆಯು ರಾಷ್ಟ್ರೀಯ ಸಹಕಾರ ಅಭಿವೃದ್ಧಿ ನಿಗಮ ತಿದ್ದುಪಡಿ ಮಸೂದೆ-೨೦೨೫ ಅನ್ನು ಸಹ ಅಂಗೀಕರಿಸಿದೆ. ಕೇಂದ್ರ ಸಹಕಾರ ಖಾತೆ ರಾಜ್ಯ ಸಚಿವ ಮುರಳೀಧರ್ ಮೊಹೋಲ್, ಈ ಮಸೂದೆಯನ್ನು ಮಂಡಿಸಿದರು. ಇದು ೧೯೬೨ ರ ರಾಷ್ಟ್ರೀಯ ಸಹಕಾರ ಅಭಿವೃದ್ಧಿ ನಿಗಮ ಕಾಯ್ದೆಯನ್ನು ಮತ್ತಷ್ಟು ತಿದ್ದುಪಡಿ ತರುವ ಗುರಿ ಹೊಂದಿದೆ. ಈ ಮಸೂದೆಯು, ನಿಗಮವು ಕೈಗಾರಿಕಾ ಸರಕುಗಳಲ್ಲಿ ತನ್ನ ಚಟುವಟಿಕೆಗಳನ್ನು ಕೈಗೊಳ್ಳಲು ಅನುವು ಮಾಡಿಕೊಡುತ್ತದೆ. ಸಹಕಾರ ಅಭಿವೃದ್ಧಿಯಲ್ಲಿ ತೊಡಗಿರುವ ಯಾವುದೇ ಘಟಕಕ್ಕೆ ನಿಗಮದಿಂದ ಹಣಕಾಸು ನೆರವು ವಿಸ್ತರಿಸಲು ಈ ಶಾಸನವು ರಾಜ್ಯ ಸರ್ಕಾರಗಳಿಗೆ ಅವಕಾಶ ನೀಡುತ್ತದೆ. ಸಹಕಾರ ಅಭಿವೃದ್ಧಿಯಲ್ಲಿ ತೊಡಗಿರುವ ಯಾವುದೇ ಸಂಘಟಿತ ಸಂಘ ಅಥವಾ ಘಟಕಕ್ಕೆ ನಿಗಮವು ನೇರವಾಗಿ ಸಾಲ ಮತ್ತು ಅನುದಾನವನ್ನು ಸಹ ಒದಗಿಸಬಹುದು. ಮಸೂದೆಯ ಕುರಿತು ಮಾತನಾಡಿದ ಸಚಿವ ಮುರಳೀಧರ್ ಮೊಹೋಲ್, ದೇಶದಲ್ಲಿ ಸಹಕಾರಿ ಕ್ಷೇತ್ರದ ಸಂಘಟಿತ ಮತ್ತು ನಿರಂತರ ಅಭಿವೃದ್ಧಿಗೆ ಹಣಕಾಸಿನ ನೆರವು ನೀಡಲು ರಾಷ್ಟ್ರೀಯ ಸಹಕಾರಿ ಅಭಿವೃದ್ಧಿ ನಿಗಮ-ಎನ್‌ಸಿಡಿಸಿ ಅನ್ನು ಸ್ಥಾಪಿಸಲಾಗಿದೆ. ಆರಂಭದಲ್ಲಿ, ಎನ್‌ಸಿಡಿಸಿಯ ಚಟುವಟಿಕೆಗಳು ಹೆಚ್ಚಾಗಿ ಸಹಕಾರಿ ಸಂಘಗಳ ಮೂಲಕ ಉತ್ಪಾದನೆ, ಸಂಸ್ಕರಣೆ ಮತ್ತು ಸಂಬಂಧಿತ ಸೇವೆಗಳಿಗೆ ಸೀಮಿತವಾಗಿದ್ದವು. ನಂತರದ ವರ್ಷಗಳಲ್ಲಿ, ಸಂಸ್ಕರಣೆ, ಮಾರುಕಟ್ಟೆ, ಸಂಗ್ರಹಣೆ, ರಫ್ತು ಮತ್ತು ಆಮದುಗಳಿಗೆ ಸಂಬಂಧಿಸಿದ ಯೋಜನೆಗಳ ಅನುಷ್ಠಾನ ಒಳಗೊಂಡಂತೆ ಅದರ ಪಾತ್ರ ವಿಸ್ತರಿಸಿದೆ ಎಂದು ಹೇಳಿದರು. ಇತ್ತೀಚಿನ ವರ್ಷಗಳಲ್ಲಿ, ಎನ್‌ಸಿಡಿಸಿ ರಾಜ್ಯ ಸರ್ಕಾರಿ ಸಂಸ್ಥೆಗಳು ಮತ್ತು ಇತರ ಸಂಸ್ಥೆಗಳ ಸಹಯೋಗದೊಂದಿಗೆ ಮೂಲಸೌಕರ್ಯ, ತಂತ್ರಜ್ಞಾನ ಮತ್ತು ಹಣಕಾಸು ಸೇವೆಗಳಂತಹ ಕ್ಷೇತ್ರಗಳಲ್ಲಿ ಸಹಕಾರಿ ಅಭಿವೃದ್ಧಿಯಲ್ಲಿ ಸಕ್ರಿಯ ಪಾತ್ರ ವಹಿಸುತ್ತಿದೆ ಎಂದು ಅವರು ಮಾಹಿತಿ ನೀಡಿದರು. ವಿರೋಧ ಪಕ್ಷದ ಗದ್ದಲದ ನಡುವೆ ಎರಡೂ ಮಸೂದೆಗಳನ್ನು ಚರ್ಚೆಯಿಲ್ಲದೆ ಅಂಗೀಕರಿಸಲಾಯಿತು.

<><><><>

೨೦೨೪ರ ಫೆಬ್ರವರಿಯಲ್ಲಿ ಪ್ರಧಾನಮಂತ್ರಿ ಸೂರ್ಯಘರ್ ಮುಫ್ತ್ ಬಿಜ್ಲಿ ಯೋಜನೆ ಆರಂಭವಾದಾಗಿನಿಂದ ಇದುವರಗೆ ೫೦ ಲಕ್ಷಕ್ಕೂ ಹೆಚ್ಚು ಕುಟುಂಬಗಳು ಪ್ರಯೋಜನ ಪಡೆದಿವೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ಲೋಕಸಭೆಯಲ್ಲಿಂದು ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ, ಈ ಯೋಜನೆಯಡಿ ದೇಶಾದ್ಯಂತ ಕೇಂದ್ರ ಹಣಕಾಸು ನೆರವಿನಡಿ ಇದುವರೆಗೆ ೨೮ ಸಾವಿರ ಕೋಟಿ ರೂಪಾಯಿಗೂ ಹೆಚ್ಚಿನ ಮೌಲ್ಯದ ಸಬ್ಸಿಡಿಯನ್ನು ಬಿಡುಗಡೆ ಮಾಡಲಾಗಿದೆ ಎಂದು ಮಾಹಿತಿ ನೀಡಿದರು. ಇದು ಬೇಡಿಕೆ ಆಧಾರಿತ ಯೋಜನೆಯಲ್ಲಿ ಸ್ಥಳೀಯ ಬೆಸ್ಕಾಂನೊಂದಿಗೆ ಗ್ರಿಡ್ ಸಂಪರ್ಕಿತ ವಿದ್ಯುತ್ ಸಂಪರ್ಕವನ್ನು ಹೊಂದಿರುವ ದೇಶದ ಎಲ್ಲಾ ವಸತಿ ಗ್ರಾಹಕರು ಮೇಲ್ಛಾವಣಿ ಸೌರ ವ್ಯವಸ್ಥೆಗಳ ಸ್ಥಾಪನೆಗಾಗಿ ಯೋಜನೆಗಳ ಪ್ರಯೋಜನವನ್ನು ಪಡೆಯಬಹುದು ಎಂದು ಹೇಳಿದರು. ಯೋಜನೆಯ ಬಜೆಟ್ ಅನ್ನು ೨೦೨೫-೨೬ರಲ್ಲಿ ೧೭ ಸಾವಿರ ಕೋಟಿ ರೂಪಾಯಿಗಳಿಂದ ೨೦೨೬-೨೭ರಲ್ಲಿ ೨೨ ಸಾವಿರ ಕೋಟಿ ರೂಪಾಯಿಗಳಿಗೆ ಹೆಚ್ಚಿಸಲಾಗಿದೆ ಎಂದು ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದರು.

<><><><>

ಭಾರತೀಯ ಹವಾಮಾನ ಇಲಾಖೆಯೊಂದಿಗೆ ನಿಕಟ ಸಮನ್ವಯದೊಂದಿಗೆ ಮುಂಗಾರು ಪರಿಸ್ಥಿತಿ ಮತ್ತು ಕೃಷಿಯ ಮೇಲೆ ಎಲ್ ನಿನೋ ಪರಿಸ್ಥಿತಿಗಳ ಸಂಭವನೀಯ ಪರಿಣಾಮಗಳನ್ನು ನಿರಂತರವಾಗಿ ಮೇಲ್ವಿಚಾರಣೆ ನಡೆಸಲಾಗುತ್ತಿದೆ ಎಂದು ಕೇಂದ್ರ ಸರ್ಕಾರ ಹೇಳಿದೆ. ಲೋಕಸಭೆಯಲ್ಲಿಂದು ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಖಾತೆ ರಾಜ್ಯ ಸಚಿವ ರಾಮನಾಥ್ ಠಾಕೂರ್, ವಾಡಿಕೆಗಿಂತ ಕಡಿಮೆ ಮಳೆ ಬೀಳುವ ಸಾಧ್ಯತೆಯಿರುವ ೩೪೨ ಜಿಲ್ಲೆಗಳನ್ನು ಒಳಗೊಂಡ ೧೫ ರಾಜ್ಯಗಳಿಗೆ ಜಿಲ್ಲಾ ಕೃಷಿ ಯೋಜನೆಗಳನ್ನು ನವೀಕರಿಸಲಾಗಿದೆ ಎಂದು ಮಾಹಿತಿ ನೀಡಿದರು. ಎಲ್ ನಿನೋ ಸಂಬಂಧಿತ ಅಪಾಯಗಳನ್ನು ತಗ್ಗಿಸಲು ಕೃಷಿ ವಿಜ್ಞಾನ ಕೇಂದ್ರಗಳಿಗೆ ಭಾರತೀಯ ಕೃಷಿ ಸಂಶೋಧನಾ ಮಂಡಳಿಯಿಂದ ಪ್ರಮಾಣಿತ ಕಾರ್ಯಾಚರಣಾ ವಿಧಾನಗಳು ಸಹ ನೀಡಲಾಗಿದೆ ಎಂದು ಹೇಳಿದರು. ರಾಜ್ಯಗಳಿಗೆ ಸಾಕಷ್ಟು ಬಿತ್ತನೆ ಬೀಜಗಳ ಲಭ್ಯತೆಯನ್ನು ಖಚಿತಪಡಿಸಲಾಗಿದೆ. ಜಲಾಶಯಗಳ ನೀರಿನ ಉತ್ತಮ ಬಳಕೆಗಾಗಿ ಮತ್ತು ಸಮರ್ಥ ನೀರಾವರಿ ಪದ್ಧತಿಗಳನ್ನು ಉತ್ತೇಜಿಸಲು ಪೂರ್ವ ಯೋಜನೆಗಳನ್ನು ಕೈಗೊಳ್ಳುವಂತೆ ಕೇಂದ್ರ ಜಲ ಆಯೋಗ ಮತ್ತು ರಾಜ್ಯ ಸರ್ಕಾರಗಳಿಗೆ ಸಲಹೆ ನೀಡಲಾಗಿದೆ ಎಂದು ಸಚಿವ ರಾಮನಾಥ್ ಠಾಕೂರ್ ತಿಳಿಸಿದರು.

<><><><>

ಸಂಸತ್ತಿನಲ್ಲಿ ಚರ್ಚೆಗಳ ಗುರಿಯನ್ನು ಕಾಂಗ್ರೆಸ್ ಪಕ್ಷ ಬದಲಾಯಿಸುತ್ತಿದೆ ಮತ್ತು ಸದನದ ಸರಿಯಾದ ಕಾರ್ಯನಿರ್ವಾಹಣೆಗೆ ಅಡ್ಡಿಪಡಿಸುತ್ತಿದೆ ಎಂದು ಬಿಜೆಪಿ ಆರೋಪಿಸಿದೆ. ನವದೆಹಲಿಯಲ್ಲಿಂದು ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ರಾಜ್ಯಸಭಾ ಸದಸ್ಯ ಮತ್ತು ಬಿಜೆಪಿ ವಕ್ತಾರ ಸುಧಾಂಶು ತ್ರಿವೇದಿ, ಕಾಂಗ್ರೆಸ್ ಪಕ್ಷ ಚರ್ಚೆಯನ್ನು ಬಯಸುವುದಿಲ್ಲ ಮತ್ತು ತನ್ನ ಬೇಡಿಕೆಗಳನ್ನು ಬದಲಾಯಿಸುತ್ತಿದೆ ಎಂದು ದೂರಿದ್ದಾರೆ. ಲೋಕಸಭೆಯಲ್ಲಿ ವಿರೋಧಪಕ್ಷದ ನಾಯಕ ರಾಹುಲ್ ಗಾಂಧಿ ಅವರು, ಸರ್ಕಾರದ ಉತ್ತರದಿಂದ ತಪ್ಪಿಸಿಕೊಳ್ಳುತ್ತಲೇ ಇದ್ದಾರೆ. ಅವರು ಸದನದಿಂದ ಹೊರ ನಡೆಯದಿದ್ದರೆ, ಕೇಂದ್ರ ಗೃಹ ಸಚಿವ ಅಮಿತ್ ಶಾ, ಪ್ರತಿಯೊಂದು ವಿಷಯಕ್ಕೂ ಹಂತ ಹಂತವಾಗಿ ಪ್ರತಿಕ್ರಿಯಿಸುತ್ತಾರೆ ಎಂದು ಹೇಳಿದರು.

<><><>

ಸ್ವಾತಂತ್ರ್ಯ ದಿನಾಚರಣೆಗೂ ಮುನ್ನ ದೇಶಾದ್ಯಂತ ನಡೆಯುತ್ತಿರುವ ಹರ್ ಘರ್ ತಿರಂಗಾ ಅಭಿಯಾನವು ಗಮನಾರ್ಹ ವೇಗವನ್ನು ಪಡೆಯುತ್ತಿದೆ. ಇದು ಎಲ್ಲಾ ಹಂತಗಳ ನಾಗರಿಕರು ಭಾರತದ ರಾಷ್ಟ್ರೀಯ ಹೆಮ್ಮೆ ಮತ್ತು ಏಕತೆಯ ಮನೋಭಾವದ ಸಾಮೂಹಿಕ ಆಚರಣೆಯಲ್ಲಿ ಒಟ್ಟಾಗಿ ಸೇರಲು ಪ್ರೇರೇಪಿಸುತ್ತದೆ. ಸಾಮಾಜಿಕ ಜಾಲತಾಣದಲ್ಲಿ ವಿಡಿಯೋ ಹಂಚಿಕೊಂಡಿರುವ ಪ್ರಧಾನಿ ನರೇಂದ್ರ ಮೋದಿಯವರು, ದೇಶವಾಸಿಗಳು ಸ್ವಾತಂತ್ರ್ಯ ದಿನವನ್ನು ಹೆಮ್ಮೆ ಮತ್ತು ಭವ್ಯತೆಯಿಂದ ಆಚರಿಸಬೇಕು ಹಾಗೂ ವಿಕಸಿತ ಭಾರತವನ್ನು ನಿರ್ಮಿಸುವ ಪ್ರತಿಜ್ಞೆ ಮಾಡಬೇಕು. ಹರ್ ಘರ್ ತಿರಂಗಾ ಅಭಿಯಾನದಡಿ ಎಲ್ಲರೂ ತಮ್ಮ ಮನೆಗಳಲ್ಲಿ ತ್ರಿವರ್ಣ ಧ್ವಜ ಹಾರಿಸಬೇಕು ಎಂದು ಕರೆ ನೀಡಿದ್ದಾರೆ.

<><><>

ಅರುಣಾಚಲ ಪ್ರದೇಶವು ಭಾರತದ ಅವಿಭಾಜ್ಯ ಅಂಗವಾಗಿದ್ದು, ಈ ನಿರ್ವಿವಾದದ ವಾಸ್ತವವನ್ನು ಯಾವುದೂ ಬದಲಾಯಿಸಲೂ ಸಾಧ್ಯವಿಲ್ಲ ಎಂದು ಭಾರತ ಪುನರುಚ್ಚರಿಸಿದೆ. ನವದೆಹಲಿಯಲ್ಲಿಂದು ಸುದ್ದಿಗಾರರಿಗೆ ಮಾಹಿತಿ ನೀಡಿದ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಭಾರತ ಮತ್ತು ಚೀನಾ ನಡುವಿನ ಗಡಿ ಸಂಬಂಧಿಸಿದ ವಿಷಯಗಳಲ್ಲಿ ಚೀನಾದೊಂದಿಗಿನ ಚರ್ಚೆಗಳಲ್ಲಿ ಭಾರತ ಈ ವಿಷಯಗಳನ್ನು ಅತ್ಯಂತ ಗಂಭೀರವಾಗಿ ಪರಿಗಣಿಸುತ್ತದೆ. ಈ ಪ್ರದೇಶಗಳಲ್ಲಿ ಶಾಂತಿ ಮತ್ತು ನೆಮ್ಮದಿ ಕಾಪಾಡಿಕೊಳ್ಳುವುದು ದೇಶಕ್ಕೆ ಅತ್ಯಂತ ಮಹತ್ವದ್ದಾಗಿದೆ ಎಂದು ಹೇಳಿದರು. ನವದೆಹಲಿಯಲ್ಲಿ ನಡೆಯಲಿರುವ ಬ್ರಿಕ್ಸ್ ಔಟ್ರೀಚ್ ಅಧಿವೇಶನಕ್ಕೆ ಬಾಂಗ್ಲಾದೇಶ ಪ್ರಧಾನಿ ತಾರಿಕ್ ರೆಹಮಾನ್ ಅವರನ್ನು ಭಾರತ ಆಹ್ವಾನಿಸಿದೆ. ಬಾಂಗ್ಲಾದೇಶದ ಪ್ರಧಾನಿಯೊಂದಿಗೆ ಭಾರತೀಯ ಹೈಕಮಿಷನರ್ ನಿನ್ನೆ ಸಭೆ ನಡೆಸಿದರು. ಎರಡೂ ಕಡೆಯವರು ಪರಸ್ಪರ ಹಿತಾಸಕ್ತಿಯ ವಿಷಯಗಳನ್ನು ಚರ್ಚಿಸಿದರು ಎಂದು ಅವರು ಮಾಹಿತಿ ನೀಡಿದರು.

<><><>

ಉಕ್ರೇನ್ ಮೇಲೆ ರಷ್ಯಾ ನಡೆಸಿದ ದಾಳಿಯಲ್ಲಿ ಕನಿಷ್ಠ ೯ ಉಕ್ರೇನ್ ನಾಗರಿಕರು ಮೃತಪಟ್ಟಿದ್ದು, ೨೪ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ ಎಂದು ಪ್ರಾದೇಶಿಕ ಗವರ್ನರ್ ಇವಾನ್ ಫೆಡರೊವ್ ತಿಳಿಸಿದ್ದಾರೆ. ಜಪೋರಿಜಿಯಾದಲ್ಲಿ ೬ ಜನರು ಮೃತಪಟ್ಟಿದ್ದು, ೧೯ ಮಂದಿ ಗಾಯಗೊಂಡಿದ್ದಾರೆ. ದಾಳಿಗಳಲ್ಲಿ ರಾಕೆಟ್‌ಗಳು ಮತ್ತು ಬಾಂಬ್‌ಗಳನ್ನು ಬಳಸಲಾಗಿದೆ. ಇನ್ನೊಂದು ಪ್ರದೇಶದಲ್ಲಿ ನಡೆದ ಡ್ರೋನ್ ದಾಳಿಯಲ್ಲಿ ಮೂವರು ಮೃತಪಟ್ಟಿದ್ದು, ಐವರು ಗಾಯಗೊಂಡಿದ್ದಾರೆ. ರಾಜಧಾನಿ ಕೈವ್ ಮೇಲೆ ಬ್ಯಾಲಿಸ್ಟಿಕ್ ಡ್ರೋನ್‌ಗಳಿಂದ ದಾಳಿ ನಡೆಸಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ. ಇನ್ನೊಂದೆಡೆ, ರಷ್ಯಾದ ವಿವಿಧ ಪ್ರದೇಶಗಳಲ್ಲಿ ಉಕ್ರೇನ್ ನಡೆಸಿದ ದಾಳಿಯಲ್ಲಿ ೩೯೬ ಡ್ರೋನ್‌ಗಳನ್ನು ತಡೆಹಿಡಿದು ನಾಶಪಡಿಸಲಾಗಿದೆ ಎಂದು ರಷ್ಯಾ ರಕ್ಷಣಾ ಸಚಿವಾಲಯ ತಿಳಿಸಿದೆ.

<><><><>

ನವದೆಹಲಿಯ ವಿಜ್ಞಾನ ಭವನದಲ್ಲಿಂದು ಇದೇ ಗುರುವಾರ ೧೧೫ ಕಲಾವಿದರಿಗೆ ೨೦೨೪ ಮತ್ತು ೨೦೨೫ರ ಸಂಗೀತ ನಾಟಕ ಅಕಾಡೆಮಿ ಫೆಲೋಶಿಪ್ ಮತ್ತು ಪ್ರಶಸ್ತಿಗಳನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರದಾನ ಮಾಡಲಿದ್ದಾರೆ. ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಕೇಂದ್ರ ಸಂಸ್ಕೃತಿ ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಮತ್ತು ಕೇಂದ್ರ ಸಂಸ್ಕೃತಿ ಖಾತೆ ರಾಜ್ಯ ಸಚಿವ ರಾವ್ ಇಂದ್ರಜಿತ್ ಸಿಂಗ್ ಭಾಗವಹಿಸಲಿದ್ದಾರೆ. ಫೆಲೋಶಿಪ್ ಗೌರವವು ಮೂರು ಲಕ್ಷ ರೂಪಾಯಿ ಹಾಗೂ ಅಕಾಡೆಮಿ ಪ್ರಶಸ್ತಿಯು ಒಂದು ಲಕ್ಷ ರೂಪಾಯಿ ನಗದು ಬಹುಮಾನದೊಂದಿಗೆ ತಾಮ್ರ ಪತ್ರ ಮತ್ತು ಅಂಗವಸ್ತ್ರವನ್ನು ಹೊಂದಿದೆ.

<><><><>

ಆರ್ಟೆಮಿಸ್ ಒಪ್ಪಂದಗಳ ಅಡಿಯಲ್ಲಿ ಎರಡು ದೇಶಗಳ ಪಾಲುದಾರಿಕೆಯನ್ನು ಆಧರಿಸಿ, ನಾಸಾ ತನ್ನ ಚಂದ್ರನ ಬಾಹ್ಯಾಕಾಶ ಯೋಜನೆಗೆ ಸೇರಲು ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ-ಇಸ್ರೋಗೆ ಆಹ್ವಾನಿಸಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>